O.S.No. 56/2010 P W - 1

ದಿನಾಂಕ 27.03.2024 ರಂದು ಸಾಕ್ಷಿಯನ್ನು ಕರೆಯಿಸಿ, ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲು : 5 ನೇ ಪ್ರತಿವಾದಿ ಪರ ಶ್ರೀ. ಜೆ. ಎಂ. ವಕೀಲರಿಂದ :

ನಾನು ನನ್ನ ತಮ್ಮನಾದ ಶಿವರಾಮು ಮೇಲೆ ಜಮೀನಿನ ವಿಷಯವಾಗಿ ದಾವೆಯನ್ನು ಸಲ್ಲಿಸಿರುತ್ತೇನೆ. 4 ಎಕರೆ 17 ಗುಂಟೆ ವಿಸ್ತೀರ್ಣ ಕ್ಕೆ ದಾವೆಯನ್ನು ಹೂಡಿರುತ್ತೇನೆ. ದಾವಾ ಆಸ್ತಿಯ ಚಕ್ಕುಬಂಧಿ ಮತ್ತು ಸರ್ವೆ ನಂಬರ್ ಗೊತ್ತಿಲ್ಲ. ನಾನು ನಮ್ಮ ತಾಯಿಗೆ 50 ಸಾವಿರ ಪಾವತಿ ಮಾಡಿದ ಬಗ್ಗೆ ಯಾವುದೇ ದಾಖಲೆ ಯನ್ನು ಹಾಜರುಪಡಿಸಿರುವುದಿಲ್ಲ.

ಚನ್ನವೀರಯ್ಯ ರವರಿಂದ ನಮ್ಮ ತಾಯಿ ಮತುತ ಎಲ್ಲರೂ ಸೇರಿ 1998, 2001 ಮತ್ತು 2003 ರಲ್ಲಿ ಖರೀದಿ ಮಾಡಿರುತ್ತಾರೆ ಎಂದರೆ ಸರಿ. 3 ನೇ ಪ್ರತಿವಾದಿ ನನ್ನ ಸಹೋದರ. 3 ನೇ ಪ್ರತಿವಾದಿಯ ಪರವಾಗಿ ನನ್ನ ತಾಯಿ ದಾನ ಪತ್ರ ಬರೆಸಿಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು 3 ನೇ ಪ್ರತಿವಾದಿ ಮೋಸದಿಂದ ಬರೆಸಿಕೊಂಡಿರುತ್ತಾರೆ ಎಂದು ನುಡಿಯುತ್ತಾರೆ. ದಾವಾ ಸ್ವತ್ತುಗಳು ನನ್ನ ತಾಯಿಯ ಸ್ವಯಾರ್ಜಿತ ಸ್ವತ್ತುಗಳಾಗಿದ್ದರಿಂದ ನನಗೆ ಯಾವುದೇ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ.

5 ನೇ ಪ್ರತಿವಾದಿಗೆ ಮಾರಾಟ ಮಾಡುವ ಪೂರ್ವದಲ್ಲಿ 3 ನೇ ಪ್ರತಿವಾದಿ ಮತ್ತು ನನ್ನ ತಾಯಿಯನ್ನು ಆಸ್ತಿಯಲ್ಲಿ ಭಾಗ ಕೇಳಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳ ವಿರುದ್ಧ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ:**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನವನ್ನು ಗಣಕೀಕರಣ ಮಾಡಲಾಯಿತು)

ಓ ಹೇ ಕೇ ಸ ಒ

ಎರಡನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆಎಂಎಫ್‌ಸಿ, ಕನಕಪುರ